<u>ಸಾಕ್ಷಿಯನ್ನು ದಿಃ 21-01-2021 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**<u>ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ – ಶ್ರೀ ಎಸ್ ಕೆ ಆರ್ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ವಿಷಯಗಳೆಲ್ಲವೂ ಸತ್ಯವಾಗಿದ್ದು ಅದಕ್ಕೆ ನಾನು ಸಹಿ ಮಾಡಿದ್ದೇನೆ.

ನಾನು ನಮ್ಮ ಕುಟುಂಬದ ವಂಶವೃಕ್ಷವನ್ನು ವಿವರಿಸುವ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು, ದಿಃ24.11.2017 ರ ದಾನ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ-2 ಎಂದು, ದಿಃ24.11.2017 ರ ದಾನ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ-3 ಎಂದು, ಋಣಭಾರ ರಹಿತ ಪ್ರಮಾಣ ಪತ್ರನ್ನು ನಿಪಿ-4 ಎಂದು, ಸರ್ವೆ ನಂ.92/ಪಿ1 ರ ಪಹಣಿ ಪತ್ರಿಕೆಯನ್ನು ನಿಪಿ-5 ಎಂದು, ಸರ್ವೆ ನಂ.92/2 ರ ಪಹಣಿ ಪತ್ರಿಕೆಯನ್ನು ನಿಪಿ-6 ಎಂದು, ಎಂ ಆರ್ ನಂ.ಹೆಚ್ 14/2017-2018 ರ ಮ್ಯೂಟೇಷನ್ ರಿಜಿಸ್ಟರ್ ಪ್ರತಿಯನ್ನು ನಿಪಿ-7 ಎಂದು, ಎಂ ಆರ್ ನಂ.ಹೆಚ್ 15/2017-18 ರ ಮ್ಯೂಟೇಷನ್ ರಿಜಿಸ್ಟರ್ ಪ್ರತಿಯನ್ನು ನಿಪಿ-8 ಎಂದು, ಹಾಗೂ ನನ್ನ ತಮ್ಮನ ಮರಣ ಪ್ರಮಾಣ ಪತ್ರವನ್ನು ನಿಪಿ-9 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ

**<u>ಪಾಟೀ ಸವಾಲು ಪ್ರತಿವಾದಿಗಳ ಪರ ವಕೀಲರಿಂದಃ</u>**

(ಈ ಹಂತದಲ್ಲಿ ಸಾಕ್ಷಿಯ ಪಾಟೀ ಸವಾಲಿಗೆ ಪ್ರತಿವಾದಿಗಳ ಪರ ವಕೀಲರು ಸಮಯಾವಕಾಶ ಕೋರಿದ್ದು ಸಮಯಾವಕಾಶ ನೀಡಲಾಯಿತು).
ನನ್ನ ಉಕ್ತ ಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ ಹಿರಿಯೂರು.